ಓ.ಎಸ್. 130/2017
ಪಿ.ಡಬ್ಲ್ಯೂ-4

ದಿನಾಂಕಃ **17.10.2025**

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಜಿ.ಆರ್.ಎಂ. ವಕೀಲರಿಂದಃ

ನಾನು ನಿವೃತ್ತ ಸರ್ಕಾರಿ ನೌಕರಳಾಗಿರುತ್ತೇನೆ ಎಂದರೆ ಸರಿ. ದಾವಾ ಸ್ವತ್ತಿನ ಪಕ್ಕದಲ್ಲಿ ನಾನು 10 ವರ್ಷಗಳ ಹಿಂದೆ ಜಮೀನನ್ನು ಖರೀದಿ ಮಾಡಿರುತ್ತೇನೆ. ನಮ್ಮ ಜಮೀನಿನ ಪೂರ್ವಕ್ಕೆ ಪ್ರತಿವಾದಿಯ ಜಮೀನು ಇರುತ್ತದೆ. ಪ್ರತಿವಾದಿಯ ಜಮೀನಿನ ವಿಸ್ತೀರ್ಣ ನನಗೆ ಗೊತ್ತಿರುವುದಿಲ್ಲ. ನನ್ನ ಜಮೀನಿನ ಸರ್ವೆ ನಂ. 33/24 ಮತ್ತು ಸರ್ವೆ ನಂ. 33/25. ನನ್ನ ಜಮೀನಿನ ನಿಖರವಾದ ವಿಸ್ತೀರ್ಣ ಹೇಳಲು ಆಗುವುದಿಲ್ಲ.

**2.** ದಾವಾ ಸ್ವತ್ತಿನ ದಾವಾ ಸ್ವತ್ತಿನ ಸರ್ವೆ ನಂ.31, ಆದರೆ ವಿಸ್ತೀರ್ಣ ಗೊತ್ತಿರುವುದಿಲ್ಲ. ಸರ್ವೆ ನಂ. 31 ರಲ್ಲಿ ಪ್ರತಿವಾದಿ 1 ಎಕರೆ 10 ಗುಂಟೆ ಜಮೀನಿನಲ್ಲಿ ಸಾಗುವಳಿ ಮಾಡುತ್ತಿರುತ್ತಾರೆ ಎಂದರೆ ಸರಿ. ಪ್ರತಿವಾದಿ ಸರ್ವೆ ನಂ. 31 ರಲ್ಲಿ ಜಮೀನು ಖರೀದಿ ಮಾಡಿದ ನಂತರ ಅಂದಿನಿಂದ ಅವರೇ ಸ್ವಾಧೀನದಲ್ಲಿರುತ್ತಾರೆ ಎಂದು ಸೂಚಿಸಿದ್ದಕ್ಕೆ ಸಾಕ್ಷಿಯು ನಾನು ಜಮೀನನ್ನು ಖರೀದಿ ಮಾಡಿ 10 ವರ್ಷಗಳಾಗಿರುತ್ತವೆ ಅಂದಿನಿಂದ ಪ್ರತಿವಾದಿ ಸಾಗುವಳಿ ಮಾಡುತ್ತಿರುತ್ತಾರೆ, ಅದರ ಪೂರ್ವದಲ್ಲಿ ಏನು ಆಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. 1 ನೇ ವಾದಿಯ ತಂದೆ ಪ್ರತಿವಾದಿಗೆ 1 ಎಕರೆ 10 ಗುಂಟೆ ಮಾರಾಟ ಮಾಡಿರುತ್ತಾರೆಂದರೆ ನನಗೆ ಗೊತ್ತಿರುವುದಿಲ್ಲ. ನಂತರ 1 ನೇ ವಾದಿಯ ತಾಯಿ ಪ್ರತಿವಾದಿಯ ವಿರುದ್ಧ ದಾವೆ ಹೂಡಿದ್ದರು ಎಂದರೆ ನನಗೆ ಗೊತ್ತಿರುವುದಿಲ್ಲ.

**3.** ದಾವಾ ಸ್ವತ್ತಿನ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ ಸಹ 1 ನೇ ವಾದಿಯ ಹೇಳಿಕೆಯ ಮೇರೆಗೆ 1 ನೇ ವಾದಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯಾದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ. ಇದೆ.

ಸಹಿ/-

(ಶ್ರೀ ಅಮರನಾಥ ಬಿ.ಎನ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಮಧುಗಿರಿ